ಮೇ 14 ರಿಂದ ಮಲಪ್ರಭಾ ಜಲಾಶಯದಿಂದ ನೀರು ಬಿಡುಗಡೆ; ಜಿಲ್ಲಾಧಿಕಾರಿ

ಗದಗ ಮೇ 3:– ಮಲಪ್ರಭಾ ಜಲಾಶಯದಿಂದ (ಮಲಪ್ರಭಾ ಬಲದಂಡೆ ಕಾಲುವೆ ಹಾಗೂ ನರಗುಂದ ಶಾಖಾ ಕಾಲುವೆಗೆ) ಇದೇ ಮೇ 14 ರಿಂದ ನೀರು ಹರಿಸಲಾಗುತ್ತಿದ್ದು, ಜಿಲ್ಲೆಯಲ್ಲಿ ಕುಡಿಯುವ ನೀರು ಪೂರೈಕೆಯಲ್ಲಿ ಸಮಸ್ಯೆಯಾಗದಂತೆ ಅಗತ್ಯ ಕ್ರಮ ಕೈಗೊಳ್ಳುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಅವರು ಸೂಚಿಸಿದ್ದಾರೆ.

ನಗರದ ಕೇಸ್ವಾನ್ ಸಭಾಂಗಣದಲ್ಲಿ ವಿಡಿಯೋ ಸಂವಾದ ಮೂಲಕ ಜಿಲ್ಲಾ ವಿಪತ್ತು ನರ್ವಹಣಾ ಪ್ರಾಧಿಕಾರದ ಸಭೆಯಲ್ಲಿ ಅಧಿಕಾರಿಗಳಿಂದ ಮಾಹಿತಿ ಪಡೆದು ಮಾತನಾಡಿದರು.

ಕುಡಿಯುವ ನೀರು ಪೂರೈಕೆಗೆ ಸಂಬಂಧಿಸಿದಂತೆ ಜಿಲ್ಲೆಯ ಕೆಲವು ಭಾಗಗಳಲ್ಲಿ ದೂರುಗಳು ಕೇಳಿಬರುತ್ತಿದ್ದು, ಈ ಹಿನ್ನೆಲೆ ಅಗತ್ಯ ಮುನ್ನೆಚ್ಚರ ವಹಿಸಬೇಕು. ಕುಡಿಯುವ ನೀರು ಪೂರೈಕೆಯಲ್ಲಿ ದೂರುಗಳು ಕೇಳಿ ಬರದಂತೆ ಗಮನ ಹರಿಸಬೇಕು ಎಂದರು.

ಜೂನ್ ಅಂತ್ಯದವರೆಗೂ ಕುಡಿಯುವ ನೀರು ಸರಬರಾಜಿನಲ್ಲಿ ವ್ಯತ್ಯಯವಾಗದಂತೆ ಗಮನ ಹರಿಸಬೇಕು. ಕುಡಿಯುವ ನೀರು ಪೂರೈಕೆಗೆ ಪ್ರಥಮಾದ್ಯತೆ ನೀಡಬೇಕು ಎಂದು ಸ್ಥಳೀಯ ಸಂಸ್ಥೆಗಳ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲೆಯಲ್ಲಿ ಕುಡಿಯುವ ನೀರಿನ ಪೂರೈಕೆಯಲ್ಲಿ ದೂರುಗಳೂ ಕೇಳಿಬರುತ್ತಿದ್ದು ಸಮಸ್ಯೆಗಳಿಗೆ ತಕ್ಷಣವೇ ಸ್ಪಂದಿಸಬೇಕು. ಅಧಿಕಾರಿಗಳು ಎಚ್ಚೆತ್ತುಗೊಂಡು ಕಾರ್ಯನರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ವೈಶಾಲಿ ಎಮ್.ಎಲ್ ಅವರು ತಾಕೀತು ಮಾಡಿದರು.

ಕುಡಿಯುವ ನೀರು ಪೂರೈಕೆಗೆ ಜಿಲ್ಲಾಡಳಿತದ ವತಿಯಿಂದ ಎಲ್ಲ ರೀತಿಯ ಸಹಕಾರ ನೀಡಲಾಗುವುದು. ಆ ನಟ್ಟಿನಲ್ಲಿ ಸಾರ್ವಜನಕರಿಗೆ ಅಧಿಕಾರಿಗಳು ಸ್ಪಂದಿಸುವ ಕೆಲಸ ಮಾಡಬೇಕು ಎಂದು ಜಿಲ್ಲಾಧಿಕಾರಿ ಅವರು ಹೇಳಿದರು. ಜಿ.ಪಂ.ಸಿಇಒ ಎಸ್. ಭರತ್ ಅವರು ಮಾತನಾಡಿ ಕುಡಿಯುವ ನೀರು ಪೂರೈಕೆಗೆ ಮೊದಲ ಆದ್ಯತೆ ನೀಡಬೇಕು. ಕುಡಿಯುವ ನೀರು ಸಂಬಂಧ ತುರ್ತು ಕಾಮಗಾರಿಗಳಿಗೆ ಅನುಮೋದನೆ ಪಡೆದು ಕಾರ್ಯನರ್ವಹಿಸಬೇಕು ಎಂದರು.ಹೆಚ್ಚುವರಿ ಜಿಲ್ಲಾಧಿಕಾರಿ ಸುರೇಖಾ, ಹೆಚ್ಚುವರಿ ಪೊಲೀಸ ವರಿಷ್ಠಾಧಿಕಾರಿ ಸಂಕದ, ಜಿ.ಪಂ.ಉಪ ಕಾರ್ಯದರ್ಶಿ ಸಿ.ಬಿ.ದೇವರಮನಿ, ಜಿ.ಪಂ.ಎಂಜನಿಯರ್ಗಳು, ತಹಶೀಲ್ದಾರರು, ತಾ.ಪಂ.ಇಒಗಳು, ಪುರಸಭೆ ಹಾಗೂ ಪ.ಪಂ.ಮುಖ್ಯಾಧಿಕಾರಿಗಳು ಇತರರು ಕುಡಿಯುವ ನೀರು ಸಂಬಂಧಿಸಿದಂತೆ ಮಾಹಿತಿ ನೀಡಿದರು.

ಬಿಸಿಲಿನ ದಗೆ ಬೆಳಗಾವಿ ಸೇರಿ ಆರು ಜಿಲ್ಲೆಗಳಿಗೆ ರೆಡ್ ಅಲರ್ಟ್

ಬೆಂಗಳೂರು; ಬೆಳಗಾವಿ ಜಿಲ್ಲೆ ಸೇರಿದಂತೆ ಉತ್ತರ ಕರ್ನಾಟಕದ 6 ಜಿಲ್ಲೆಗಳಿಗೆ ಹವಾಮಾನ ಇಲಾಖೆಯು ರೆಡ್ ಅಲರ್ಟ್ ಎಚ್ಚರಿಕೆಯನ್ನು ನೀಡಿದೆ. ಅತ್ಯಂತ ಹೆಚ್ಚು ಬಿಸಿಲಿನ ದಗೆ ಇರುವ ಬೆಳಗಾವಿ ಬಾಗಲಕೋಟೆ ಧಾರವಾಡ ಗದಗ್ ಹಾವೇರಿ ಮತ್ತು ಕೊಪ್ಪಳ ಜಿಲ್ಲೆಗಳಿಗೆ ರೆಡ್ ಅಲರ್ಟ್ ಎಚ್ಚರಿಕೆಯನ್ನು ಹವಾಮಾನ ಇಲಾಖೆಯು ನೀಡಿದ್ದು ಮಧ್ಯಾಹ್ನ 12 ಗಂಟೆಯಿಂದ 3 ಗಂಟೆಯವರೆಗೆ ಅತಿ ಅವಶ್ಯಕ ಕಾರ್ಯಗಳಿಗೆ ಮಾತ್ರ ಹೊರ ಬೀಳುವಂತೆ ಇನ್ನುಳಿದಂತೆ ಮನೆಯಲ್ಲಿ ಇರು ವಂತೆ ಸೂಚನೆಯನ್ನು ನೀಡಲಾ ಗಿದೆ. ಕಲ್ಬುರ್ಗಿ ಚಿತ್ರದುರ್ಗ ಕೋಲಾರ ಚಿಕ್ಕಬಳ್ಳಾಪುರ ಮಂಡ್ಯ ಮೈಸೂರು ತುಮಕೂರು ಮತ್ತು ಯಾದಗಿರಿ ಜಿಲ್ಲೆಗಳಿಗೆ ಆರೆಂಜ್ ಅಲರ್ಟ್ ಎಚ್ಚರಿಕೆಯನ್ನು ನೀಡ ಲಾಗಿದೆ. ಕಳೆದ ಎರಡು ವಾರಗಳಿಂದ ರಾಜ್ಯದ ಹಲವಾರು ಜಿಲ್ಲೆಗಳಿಗೆ ತಾಪಮಾನವು 46 ಡಿಗ್ರಿ ಸೆಲ್ಸಿಯಸ್ ದಾಖಲೆಯಾಗಿದ್ದು ಇದರಿಂದ ಸಾರ್ವಜನಕರ ಆರೋಗ್ಯವನ್ನು ಕಾಪಾಡಿಕೊಳ್ಳುವ ನಟ್ಟಿನಲ್ಲಿ ಈ ಎಚ್ಚರಿಕೆಯನ್ನು ನೀಡಲಾಗಿದೆ ಬಾಯಾರಿಕೆ ಇಲ್ಲದಿದ್ದರೂ ಸಾಕಷ್ಟು ಬಾರಿ ಸಾಕಷ್ಟು ಪ್ರಮಾಣದಲ್ಲಿ ನೀರು ಕುಡಿಯಬೇಕು ಹಗುರವಾದ ತಿಳಿ ಬಣ್ಣದ ಸಡಿಲವಾದ ಕಾಟನ್ ಬಟ್ಟೆಗಳನ್ನು ಧರಿಸಬೇಕು ಸಾಧ್ಯವಾದಷ್ಟು ನೆರಳಿನ ಪರಿಸರದಲ್ಲಿಯೇ ಕಾರ್ಯ ನರ್ವಹಿಸಬೇಕು ಎಂದು ಎಚ್ಚರಿಕೆಯನ್ನು ನೀಡಲಾಗಿದೆ ವಿಶೇಷವಾಗಿ ಹಿರಿಯರು ಮಕ್ಕಳು ರಕ್ತದ ಒತ್ತಡ ಮತ್ತು ಸಕ್ಕರೆ ಕಾಯಿಲೆ ಇರುವಂತವರು ಹೆಚ್ಚಿನ ಕಾಳಜಿ ವಹಿಸಬೇಕು ಎಂದು ಹವಾಮಾನ ಇಲಾಖೆಯು ತಿಳಿಸಿದೆ.

ಕೈಮಗ್ಗ ಮತ್ತು ಜವಳಿ ತಂತ್ರಜ್ಞಾನ : ಡಿಪ್ಲೋಮಾ ಕೋರ್ಸಿಗೆ ಅರ್ಜಿ ಆಹ್ವಾನ

ಕೊಪ್ಪಳ, ಮೇ – :2024–25 ನೇ ಸಾಲಿನ ಶೈಕ್ಷಣಿಕ ಅವಧಿಗೆ ಕೈಮಗ್ಗ ಮತ್ತು ಜವಳಿ ತಂತ್ರಜ್ಞಾನದಲ್ಲಿ ಡಿಪ್ಲೋಮಾ (ಡಿ.ಹೆಚ್.ಟಿ.ಟಿ) ಕೋರ್ಸ್ ಕಲಿಕೆಗಾಗಿ 44 ಪುರುಳ ಮತ್ತು ಮಹಿಳಾ ಅಭ್ಯರ್ಥಿಗಳನ್ನು ಆಯ್ಕೆ ಮಾಡಲು ಅರ್ಹ ಅಭ್ಯರ್ಥಿಗಳಿಂದ ಈ ಕೆಳಕಂಡ ಸಂಸ್ಥೆಗಳಿಗೆ ಅರ್ಜಿಗಳನ್ನು ಆಹ್ವಾನಸಲಾಗಿದೆ. ವ್ಯಾಸಂಗದ ಸಮಯದಲ್ಲಿ ಮಾರ್ಗಸೂಚಿಯ ಪ್ರಕಾರ ಪ್ರತಿ ವಿದ್ಯಾರ್ಥಿಗೆ ಪ್ರತಿ ತಿಂಗಳು ರೂ.2,500/– ರಂತೆ ಶಿಳ್ಯವೇತನ ನೀಡಲಾಗುವುದು ಹಾಗೂ ಪುರುಳ ಅಭ್ಯರ್ಥಿಗಳಿಗೆ ವಸತಿ ನಲಯದ ಸೌಲಭ್ಯವನ್ನು ಹಣ ಪಾವತಿಸುವ ಆಧಾರದ ಮೇಲೆ ಕಲ್ಪಿಸಲಾಗುವುದು. ಎಸ್.ಎಸ್.ಎಲ್.ಸಿ.ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಇಂಗ್ಲೀಷ್ ಭಾಷೆಯನ್ನು ಒಂದು ವಿಳಯವಾಗಿ ಅಭ್ಯಸಿಸಿ ಉತ್ತೀರ್ಣರಾಗಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. ದಿನಾಂಕ: 01–07–2024 ಅನ್ವಯಿಸುವಂತೆ ಸಾಮಾನ್ಯ ವರ್ಗದ ಅಭ್ಯರ್ಥಿಗಳು 15 ರಿಂದ 23 ರ ವಯೋಮಿತಿಯಲ್ಲಿರಬೇಕು ಹಾಗೂ ಪರಿಶಿಳ್ಟ ಜಾತಿ ಮತ್ತು ಪರಿಶಿಳ್ಟ ಪಂಗಡದ ಅಭ್ಯರ್ಥಿಗಳು 15 ರಿಂದ 25 ರ ವಯೋಮಿತಿಯಲ್ಲಿರಬೇಕು. ಅರ್ಹತಾ ಪರೀಕ್ಷೆಯಲ್ಲಿ ಗಳಿಸಿರುವ ಕ್ರೋಢೀಕೃತ ಅಂಕಗಳು ಮೆರಿಟ್ ಲೆಕ್ಕಾಚಾರಕ್ಕೆ ಆಧಾರವಾಗಿರುತ್ತವೆ.ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ಗದಗ–ಬೆಟಗೇರಿ (ಕರ್ನಾಟಕ) ಸಂಸ್ಥೆಯಲ್ಲಿ 22 ಅಭ್ಯರ್ಥಿಗಳು, ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ಸೇಲಂ (ತಮಿಳುನಾಡು) ಸಂಸ್ಥೆಯಲ್ಲಿ 17 ಅಭ್ಯರ್ಥಿಗಳು, ಎಸ್.ಪಿ.ಕೆ.ಎಂ. ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ವೆಂಕಟಗಿರಿ (ನೆಲ್ಲೂರು ಜಿಲ್ಲೆ, ಆಂಧ್ರಪ್ರದೇಶ) ಸಂಸ್ಥೆಯಲ್ಲಿ 03 ಅಭ್ಯರ್ಥಿಗಳು, ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ಕಣ್ಣೂರು (ಕೇರಳ) ಸಂಸ್ಥೆಯಲ್ಲಿ 02 ಅಭ್ಯರ್ಥಿಗಳ ಸೀಟುಗಳು ಲಭ್ಯವಿದ್ದು, ಒಟ್ಟು 44 ಸೀಟುಗಳಿಗೆ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು.ಮೆರಿಟ್ ಆಧಾರದ ಮೇಲೆ ಅರ್ಹ ಅಭ್ಯರ್ಥಿಗಳನ್ನು ಆಯಾ ಡಿಪ್ಲೋಮಾ ಸಂಸ್ಥೆಗಳಲ್ಲಿ ಕೋರ್ಸ್ ಪ್ರವೇಶ ಕುರಿತಂತೆ ಕೌನ್ಸಲಿಂಗ್‌ಗಾಗಿ ಕರೆಯಲಾಗುವುದು. ಆಸಕ್ತಿ ಇರುವ ಅಭ್ಯರ್ಥಿಗಳು ಹೆಚ್ಚಿನ ವಿವರಗಳಿಗಾಗಿ ಮತ್ತು ಅರ್ಜಿ ಫಾರಂಗಳಿಗಾಗಿ ಪ್ರಾಂಶುಪಾಲರು, ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ನರಸಾಪೂರ, ಗದಗ–ಬೆಟಗೇರಿ ದೂರವಾಣಿ ಸಂ: 08372–297221, ಮೊಬೈಲ್ ಸಂಖ್ಯೆ: 9449162822 ಅಥವಾ ಆಯಾ ಜಿಲ್ಲೆಯ ಜಂಟಿ/ಉಪ/ಸಹಾಯಕ ನರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ, ಜಿಲ್ಲಾ ಪಂಚಾಯತ್ ಇವರುಗಳನ್ನು ಸಂಪರ್ಕಿಸಿ ಪಡೆಯಬಹುದಾಗಿದೆ. ಅರ್ಜಿಗಳನ್ನು ಆನ್‌ಲೈನ್‌ನಲ್ಲಿ ಡೌನ್‌ಲೋಡ್ ಮಾಡಿಕೊಳ್ಳಲು https://khtigadag.ac.in/Admission Form.pdf ಲಿಂಕ್ ಬಳಸಬಹುದು.ಪೂರ್ಣವಾಗಿ ಭರ್ತಿ ಮಾಡಿದ ಅರ್ಜಿಗಳನ್ನು ಅಗತ್ಯ ದಾಖಲಾತಿಗಳೊಂದಿಗೆ ಪ್ರಾಂಶುಪಾಲರು, ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ನರಸಾಪೂರ, ಗದಗ–ಬೆಟಗೇರಿ–582102 ಇವರಿಗೆ ಸಲ್ಲಿಸಲು ಮೇ 31 ಕೊನೆಯ ದಿನಾಂಕವಾಗಿದೆ ಎಂದು ಕೈಮಗ್ಗ ಮತ್ತು ಜವಳಿ ಇಲಾಖೆಯ ಉಪನರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸಾಮೂಹಿಕ ವಿವಾಹಗಳು

ಚಂದನಹೊಸೂರು,–:ಬೆಳಗಾವಿ ತಾಲೂಕಿನ ಚಂದನ ಹೊಸೂರ ಗ್ರಾಮದ ಕೊಳ್ಳಬಸವ ನಾಗಲಿಂಗೇಶ್ವರ ಶ್ರೀಗಳ ಜಾತ್ರಾ ಮಹೋತ್ಸವ ಹಾಗೂ ಸಾಮೂಹಿಕ ವಿವಾಹಗಳು ಶ್ರೀ ಪರಮ ಪೂಜ್ಯ ನಾಗಯ್ಯಾ ಮಹಾಸ್ವಾಮಿಗಳ ನೇತೃತ್ವದಲ್ಲಿ ಶ್ರೀ ಸಿದ್ಧಲಿಂಗ ದೇವರು ಹಿರೇಮಠ ಚಂದನಹೊಸುರಇವರ ಸಾನಧ್ಯದಲ್ಲಿ ದಿ. 9ರಂದು ಸಾಯಂಕಾಲ ಭಜನೆ ಹಾಗೂ ಜಾಗರಣೆ ಕಾರ್ಯಕ್ರಮಗಳು ನಡೆಯುವವು.ಶುಕ್ರವಾರ 10ರಂದು ಮುಂಜಾನೆ 8ಗಂಟೆಗೆ ಕೊಳ್ಳಬಸವ ನಾಗಲಿಂಗೇಶ್ವರಗುದ್ದುಗೆ ಮಹಾರುದ್ರಾಭಿಷೇಕಜರಗುವದು.ನಂತರ ಮಧ್ಯಾಹ್ನ 12.30 ಕ್ಕೆ ಸಾಮೂಹಿಕ ವಿವಾಹಗಳು ಅಕ್ಷತಾರೋಹಣಜರುಗುವದೆಂದು ಶ್ರೀ ಕೊಳ್ಳಬಸವ ನಾಗಲಿಂಗೇಶ್ವರದೇವಸ್ಥಾನಅಭಿವೃದ್ಧಿಕಮೀಟಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.ಹೆಚ್ಚಿನ ಮಾಹಿತಿಗಾಗಿ 9972105120, 9538147326 ಗೆ ಸಂಪರ್ಕಿಸಿರಿ.

ಅರ್ಜಿ ಆಹ್ವಾನ

ಬೆಳಗಾವಿ.ಮೇ.–: ಉತ್ತರ ಕನ್ನಡ ಜಿಲ್ಲೆಯ ಹಳಿಯಾಳದ ಕೆನರಾ ಬ್ಯಾಂಕ್ ದೇಶಪಾಂಡೆ ಆರ್‌ಸೆಟಿ, ತರಬೇತಿ ಸಂಸ್ಥೆಯು ಮೇ ತಿಂಗಳಿನ ಎರಡನೇ ವಾರದಲ್ಲಿ 30 ದಿನಗಳ ಫರೇಲು ವಿದ್ಯುತ್ ಉಪಕರಣ ಸೇವಾ ಉದ್ಯಮಿ (ಹೌಸ್ ವೈರಿಂಗ್) ತರಬೇತಿಯು ಪ್ರಾರಂಭವಾಗಲಿದ್ದು ಅರ್ಜಿಗಳನ್ನು ಆಹ್ವಾನಿಸಲಾಗಿದೆ.18 ರಿಂದ 45 ವಯಸ್ಸಿನ ಗ್ರಾಮೀಣ ಭಾಗದ ನಿರುದ್ಯೋಗಿ ಯುವಕ ಯುವತಿಯರಿಗೆ ಮೊದಲ ಆದ್ಯತೆ ನೀಡಲಾಗುವುದು. ತರಬೇತಿಯಲ್ಲಿ ಕೌಶಲ್ಯ, ಸಾಫ್ಟ್ ಸ್ಕಿಲ್ಸ್, ಯೋಗ ತರಬೇತಿ ಹಾಗೂ ಬ್ಯಾಂಕಿನಿಂದ ಸಾಲ ಪಡೆದು ಸ್ವ–ಉದ್ಯೋಗ ಪ್ರಾರಂಭಿಸಲು ಬೇಕಾಗುವ ಜ್ಞಾನ, ಸರಕಾರಿ ಯೋಜನೆಗಳು ಮತ್ತು ಯೋಜನಾ ವರದಿ ತಯಾರಿಕೆ ಇನ್ನೇತರ ಮಾಹಿತಿಗಳನ್ನು ಉಚಿತವಾಗಿ ನೀಡಲಾಗುತ್ತದೆ. ಆಸಕ್ತರು ಮೇ.05 ಒಳಗಾಗಿ ಉತ್ತರ ಕನ್ನಡ ಜಿಲ್ಲೆಯ ಹಳಿಯಾಳದ ಕೆನರಾ ಬ್ಯಾಂಕ್ ದೇಶಪಾಂಡೆ ಆರ್‌ಸೆಟ್ ಸಂಸ್ಥೆ ಅಥವಾ ಸಂಸ್ಥೆಯ ದೂ. 9980510717, 9483485489 ಸಂಖ್ಯೆಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕಾಂಗ್ರೆಸ್ ಸರ್ಕಾರದಲ್ಲಿ ಹಿಂದೂ ಹೆಣ್ಣುಮಕ್ಕಳಿಗೆ ರಕ್ಷಣೆ ಇಲ್ಲಾ; ಸಿ.ಟಿ.ರವಿ

ಯರಗಟ್ಟಿ: ದೇಶದ ಅಭಿವೃದ್ಧಿ ಮತ್ತು ರಕ್ಷಣೆಗಾಗಿ ಮೋದಿಯವರನ್ನ ಮತ್ತೊಮ್ಮೆ ಭಾರತದ ಪ್ರಧಾನಿಯನ್ನಾಗಿ ಆಯ್ಕೆಮಾಡಲು ವಿಶ್ರಮಿಸದೆ ಮತದಾನದವರೆಗೆ ಶ್ರಮಿಸಬೇಕೆಂದು ಮಾಜಿ ಸಚಿವ ಸಿ.ಟಿ.ರವಿ ಹೇಳಿದರು.

ಸಮೀಪದ ಕ್ರಾಂತಿಯ ನಾಡು ಹೊಸೂರ ಗ್ರಾಮದಲ್ಲಿ ಗುರುವಾರ ನಡೆದ ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿ, ತುಷ್ಟಿಕರಣದಲ್ಲಿ ಮುಳಗಿಹೊಗಿರುವ ಕಾಂಗ್ರೆಸ್ ಸರ್ಕಾರದಲ್ಲಿ ಹಿಂದೂ ಹೆಣ್ಣುಮಕ್ಕಳಿಗೆ ರಕ್ಷಣೆ ಇಲ್ಲಾ. ಕೊಲೆ ಮಾಡಿದವರು, ಅಲ್ಪಸಂಖ್ಯಾತ ಗೂಂಡಾಗಳ ರಕ್ಷಣೆಯಲ್ಲಿ ತೊಡಗಿರುವ ಈ ಸರ್ಕಾರವನ್ನು ಕಿತ್ತೊಗೆಯಬೇಕಾಗಿದೆ. ದಿನದ ಹದಿನೆಂಟು ಘಂಟೆಗಳ ಕಾಲ ದೇಶಕ್ಕಾಗಿ ಸೇವೆ ಮಾಡುತ್ತಿರುವ ಪುಣ್ಯಾತ್ಮ ಮೋದಿಯವರ ದೂರದೃಷ್ಟಿಯಿಂದ ಕೊವಿಡ್ ಸಮಯದಲ್ಲಿ ದೇಶದ ಜನತೆಗೆ ಉಚಿತ ಲಸಿಕೆ ಸಿಕ್ಕಿದೆ. ದೇಶದ ಆರ್ಥಿಕ ಪರಿಸ್ಥಿತಿ ಜಗತ್ತಿನಲ್ಲಿಯೆ ಅತ್ಯಂತ ವೇಗವಾಗಿ ಬೆಳೆಯುತ್ತಿದೆ. ಪಾಕಿಸ್ತಾನದಂತಹ ವಿರೋಧ ರಾಷ್ಟ್ರಗಳ ಮೇಲೆ ಸರ್ಜಿಕಲ್ ಸ್ಟ್ರೈಕ್ ಮಾಡಿ, ಉಗ್ರರ ಅಟ್ಟಹಾಸವನ್ನು ಅಡಗಿಸಿದ್ದಾರೆ. ಭಾರತ ಮಾತೆಯ ಸಿಂಧೂರವಾಗಿರುವ ಜಮ್ಮುಕಾಶ್ಮೀರದಲ್ಲಿರುವ ಆರ್ಟಿಕಲ್ 370 ರದ್ದುಮಾಡಿ ಭಾರತದ ಅವಿಭಾಜ್ಯ ಅಂಗವಾಗಿದೆ ಎಂದು ತಿಳಿಸಿದರು.

ನಮಗೆ ಶಕ್ತಿ ಬಂದಾಗ ರಾಮಮಂದಿರ ಕೆಡವಿ ಮಸೀದಿ ಕಟ್ಟುತ್ತೆವೆ ಎಂದು ಹೇಳುವ ಮತಾಂದರನ್ನ ಬಗ್ಗು ಬಡೆಯಲು ಮೋದಿ ಮತ್ತೊಮ್ಮೆ ದೇಶದ ಚುಕ್ಕಾಣಿ ಹಿಡಿಯಬೇಕಾಗಿದೆ.

ಹಳ್ಳಿ ಹಳ್ಳಿಗೆ ಕುಡಿಯುವ ನೀರು ಮನೆಬಾಗಿಲಿಗೆ ತಲುಪಿಸಿದ್ದಾರೆ. ಮನೆ ಮನೆಗೆ ಗ್ಯಾಸ್ ವಿತರಣೆ, ಶೌಚಾಲಯ ನಿರ್ಮಾಣಮಾಡಿ ದೇಶದ ಜನತೆಗೆ ಆಸರೆಯಾದರೆ ಕಾಂಗ್ರೆಸ್ ಗ್ಯಾರೆಂಟಿ ಹೆಸರಿನಲ್ಲಿ ಜನತೆಯ ಸಾಮನ್ಯ ಸೇವೆಗಳಾದ ಜನನ, ಮರಣ ಹಾಗೂ ಜಮೀನು ಉತಾರಗಳ ಬೆಲೆ ಏರಿಸಿದೆ 20ರೂ ಬಾಂಡ್ ಬಂದ ಮಾಡಿ ನೂರು, ಇನ್ನುರು, ಯದನೂರುಪಾಯಿಗೆ ಏರಿಸಿದೆ, ಮುದ್ರಾಂಕ ಶುಲ್ಕವನ್ನು ಡಬಲ್ ಮಾಡಿ ಕಾಂಗ್ರೆಸ್ ಜನತೆಯ ಪಿಕ್ ಪಾಕೆಟ್ ಮಾಡುವ ಕಲೆ ಕರಗತ ಮಾಡಿಕೊಂಡಿದೆ ಲಕ್ಕಕ್ಕ ಎಂದು ಸಚಿವೆಯನ್ನು ಕಿಚಾಯಿಸಿದರು. ಬೊರವೆಲ್ ಕೊರಿಸಿದ ರೈತರಿಗೆ20ಸಾವಿರ ರೂಪಾಯಿಗಳಲ್ಲಿ ಟಿಸಿ, ಕಂಬ, ತಂತಿ ನೀಡಿದರೆ ಕಾಂಗ್ರೆಸ್ ಈ ಯೊಜನೆಯನ್ನ ಐದು ಲಕ್ಷಕ್ಕೆ ಹೆಚ್ಚಿಸಿ ಹಗಲು ದರೊಡೆ ನಡೆಸಿ, ನೀರು ಇಲ್ಲಾ ಬ್ಲೆಡು ಇಲ್ಲದೆ ತೆಲೆ ಬೋಳಿಸೊ ಕೆಲಸಕ್ಕೆ ಕಾಂಗ್ರೆಸ್ ಕೈ ಹಾಕಿದೆ. ಆದರೆ ಮೊದಿಯವರು ವಿಶ್ವ ನಾಯಕರಾಗಿ ಬೆಳೆದಿದ್ದು ಪ್ರಪಂಚದಲ್ಲಿ ಅವರ ಅಡಳಿತವನ್ನು ಮೆಚ್ಚಿದ್ದಾರೆ ಮತ್ತೊಮ್ಮೆ ಮೋದಿಗಾಗಿ ಎಲ್ಲರೂ ಶ್ರಮಿಸೋಣ ಎಂದರು.

ಕಾರ್ಯಕ್ರಮದಲ್ಲಿ ಮಾಜಿ ಶಾಸಕರಾದ ಜಗದೀಶ್ ಮೆಟಗುಡ್, ಡಾ.ವಿ.ಆಯ್.ಪಾಟೀಲ ಹಾಗೂ ಜೆಡಿಎಸ್ ಜಿಲ್ಲಾಧ್ಯಕ್ಷ ಶಂಕರ ಮಾಡಲಗಿ . ರಾಜ್ಯ ಬಿಜೆಪಿ ಮಾಧ್ಯಮ ಸಮಿತಿ ಸದಸ್ಯ ಎಫ್.ಎಸ್.ಸಿದ್ದನಗೌಡರ, ಜಿಲ್ಲಾ ರೈತ ಮೊರ್ಚಾ ಅಧ್ಯಕ್ಷ ಜಗದೀಶ್ ಬೂದಿಹಾಳ ಮಾತನಾಡಿದರು.

ಹೊಸೂರ ಗ್ರಾಮದ ಕ್ರಾಂತಿಯ ಇತಿಹಾಸ ಕೇಳಿದ ಸಿ.ಟಿ.ರವಿ ಹೊಸೂರ ಪುಣ್ಯ ಭುಮಿಗೆ ಹಣೆಮನೆದು ನಮಸ್ಕಾರ ಸಲ್ಲಿಸಿದರು. ಗ್ರಾಮದವತಿಯಿಂದ ಮಾಜಿ ಸಚಿವರಾದ ಮುರಗೇಶ ನಿರಾಣಿ ಹಾಗೂ ಸಿ.ಟಿ.ರವಿ ಅವರನ್ನು ಸತ್ಕರಿಸಿದರು.

ಕಾರ್ಯಕ್ರಮದಲ್ಲಿ ಮಂಡಲ ಅಧ್ಯಕ್ಷ ಗುರುಪಾದ ಕಳ್ಳಿ, ಗುರು ಮೆಟಗುಡ್, ವಿಜಯ ಮೆಟಗುಡ್, ಮಡಿವಾಳಪ್ಪ ಚಳಕೊಪ್ಪ, ಗೌಡಪ್ಪ ಹೊಸಮನಿ, ಸುನೀಲ ಮೆಟಿ, ದೀಲಿಪ್ ವರ್ಣೇಕರ್, ಸುಭಾಷ ಬಾಗೆವಾಡಿ, ಗ್ರಾಪಂ ಸದಸ್ಯರಾದ ಮಲ್ಲಿಕಾರ್ಜುನ ಕರಡಿಗುದ್ದಿ, ಮುಶೆಪ್ಪ ಜಡಿ, ಮಲ್ಲಿಕಾರ್ಜುನ ವಕ್ಕುಂದ, ಜಯಶ್ರೀ ಇಂಗಳಗಿ, ಮಡಿವಾಳಪ್ಪ ಕಮತಗಿ, ಮಲ್ಲವ್ವ ಬಾರಿಗಿಡದ, ಸಂಜು ಪಾಟೀಲ, ಮಲ್ಲವ್ವ ಸುತಗಟ್ಟಿ, ದೀಪಾ ಪಾಟಿಲ ಹಾಗೂ ಬಿಜೆಪಿ ಮುಖಂಡರಾದ ಶ್ರೀಶೈಲ ಯಡಹಳ್ಳಿ, ಅಶೋಕ ಇಂಗಳಗಿ, ರಮೇಶ ವಕ್ಕುಂದ, ಅಜ್ಜಪ್ಪ ಸಂಗೊಳ್ಳಿ, ಕುಮಾರ ಸೊಗಲ, ಯಲ್ಲಪ್ಪ ಮುಗಬಸವ ಸೇರಿದಂತೆ ಸಾವಿರಾರು ಕಾರ್ಯಕರ್ತರು ಕಾರ್ಯಕ್ರಮದಲ್ಲಿ ಇದ್ದರು.

ಮಣಿಪುರ ರಾಜ್ಯದ ಬಾಲಕಿ ಬೆಳಗಾವಿಯಲ್ಲಿ ರಕ್ಷಣೆ

ಬೆಳಗಾವಿ.ಮೇ.–: ಮಣಿಪುರ ರಾಜ್ಯದ ಬಾಲಕಿಯು ಕಳೆದ ಡಿಸೆಂಬರನಲ್ಲಿ ತನ್ನ ತಾಯಿಗೆ ತಿಳಿಸಿ ಕೆಲಸಕ್ಕೆ ಹೋಗುತ್ತೆನೆಂದು ಹೈದರಾಬಾದಗೆ ಬಂದು ಅಲ್ಲಿ ಕೆಲಸ ಪ್ರಾರಂಭಿಸುತ್ತಾರೆ. ಅಲ್ಲಿ ಸರಿಯಾಗಿ ಸಂಬಳ ಸಿಗದೆ ಇರುವ ಕಾರಣದಿಂದ ಕೇರಳಾದ ಕೋಚ್ಚಿನ್ ನಗರದ ಹೋಟೆಲ್ ಒಂದರಲ್ಲಿ ಕೆಲಸಕ್ಕೆ ಸೇರಿಕೋಳುತ್ತಾಳೆ. ಅಲ್ಲಿಯು ಕೂಡಾ ಸರಿಯಾಗಿ ಸಂಬಳ ಸಿಗದೇ ಇರುವುದರಿಂದ ಕಳೆದ ಮಾರ್ಚ್ 18 ರಂದು ಬೆಳಗ